## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆಯ ಸೇವೆಗೆ ಸೇರಿದ ಶ್ರೀ ಎ.ಸಿ.ಮನೋಜ್ ಕುಮಾರ್, ಸಹಾಯಕ ಇಂಜಿನಿಯರ್ ಇವರಿಗೆ ಕೆ.ಸಿ.ಎಸ್.ಆರ್. ನಿಯಮ 32ರ ಅನುಸಾರ ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಹುದ್ದೆಯಲ್ಲಿ ಸ್ವತಂತ್ರ ಪ್ರಭಾರದಲ್ಲಿರಿಸಿರುವುದನ್ನು ರದ್ದುಪಡಿಸಿ ಸಹಾಯಕ ಇಂಜಿನಿಯರ್ ಹುದ್ದೆಯಲ್ಲಿಯೇ ಮುಂದುವರೆಸುವ ಬಗ್ಗೆ - ಆದೇಶ.

**ಓದಲಾಗಿದೆ:-**

1. ಸರ್ಕಾರದ ಅಧಿಸೂಚನೆ ಸಂಖ್ಯೆ: ಗ್ರಾಅಪ 165 ಸೇಶಿಕಾ 2019 ದಿನಾಂಕ: 20.09.2019
2. ಸರ್ಕಾರದ ಅಧಿಸೂಚನೆ ಸಂಖ್ಯೆ: ಗ್ರಾಅಪ 165 ಸೇಶಿಕಾ 2019 ದಿನಾಂಕ: 05.10.2019
3. ಸರ್ಕಾರದ ಕಾರಣ ಕೇಳುವ ನೋಟೀಸ್: ಗ್ರಾಅಪ 86 ಇಎನ್‌ಕ್ಯೂ 2019 ದಿನಾಂಕ: 16.11.2019
4. ಶ್ರೀ ಮನೋಜ್ ಕುಮಾರ್, ಎ.ಸಿ., ಸಹಾಯಕ ಇಂಜಿನಿಯರ್, ಇವರು ಸರ್ಕಾರಕ್ಕೆ ಸಲ್ಲಿಸಿರುವ ಲಿಖಿತ ವಿವರಣೆ ದಿನಾಂಕ: 22.11.2019

*****

**ಪ್ರಸ್ತಾವನೆ:**

ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆಯ ಸೇವೆಗೆ ಸೇರಿದ ಶ್ರೀ ಮನೋಜ್ ಕುಮಾರ್, ಎ.ಸಿ., ಸಹಾಯಕ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗ, ಬೆಂಗಳೂರು ಗ್ರಾಮಾಂತರ ಇವರಿಗೆ ಉಲ್ಲೇಖ (1)ರ ದಿನಾಂಕ: 20.09.2019ರ ಅಧಿಸೂಚನೆ ಕ್ರ.ಸಂ.28 ರಲ್ಲಿ ಕೆ.ಸಿ.ಎಸ್.ಆರ್. ನಿಯಮ 32ರ ಅನುಸಾರ ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಹುದ್ದೆಯಲ್ಲಿ ಸ್ವತಂತ್ರ ಪ್ರಭಾರದಲ್ಲಿರಿಸಿ, ತದನಂತರ ಉಲ್ಲೇಖ (2)ರ ದಿನಾಂಕ: 05.10.2019ರ ಅಧಿಸೂಚನೆ (17) ಯಲ್ಲಿ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಉಪ ವಿಭಾಗ, ನರಗುಂದ ಇಲ್ಲಿ ಖಾಲಿ ಇರುವ ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಹುದ್ದೆಗೆ ಸ್ಥಳ ನಿಯುಕ್ತಿಗೊಳಿಸಲಾಗಿತ್ತು. ಅದರಂತೆ ಸದರಿಯವರು ಸ್ಥಳ ನಿಯುಕ್ತಿಗೊಳಿಸಲಾದ ಹುದ್ದೆಯಲ್ಲಿ ಕರ್ತವ್ಯಕ್ಕೆ ವರದಿ ಮಾಡಿಕೊಂಡಿಲ್ಲವಾದ್ದರಿಂದ ಉಲ್ಲೇಖ (3)ರ ದಿನಾಂಕ: 16.11.2019ರಂದು ಕಾರಣ ಕೇಳುವ ನೋಟೀಸ್ ಜಾರಿ ಮಾಡಿ ಸ್ಥಳ ನಿಯುಕ್ತಿಗೊಳಿಸಿದ ಹುದ್ದೆಯಲ್ಲಿ ಕೂಡಲೇ ಕರ್ತವ್ಯಕ್ಕೆ ವರದಿ ಮಾಡಿಕೊಳ್ಳತಕ್ಕದ್ದು. ತಪ್ಪಿದ್ದಲ್ಲಿ ನಿಯಮ 32ರಡಿ ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಹುದ್ದೆಗೆ ಸ್ವತಂತ್ರ ಪ್ರಭಾರದಲ್ಲಿರಿಸಿರುವ ಆದೇಶವನ್ನು ಹಿಂಪಡೆದು, ಸಹಾಯಕ ಇಂಜಿನಿಯರ್ ಹುದ್ದೆಯಲ್ಲಿಯೇ ಮುಂದುವರೆಸಲಾಗುವುದೆಂದು ಹಾಗೂ ಸದರಿ ಲೋಪಕ್ಕಾಗಿ ಶಿಸ್ತು ಕ್ರಮ ವಹಿಸಲಾಗುವುದೆಂದು ತಿಳಿಸಲಾಗಿತ್ತು.

ಪ್ರತಿಯಾಗಿ ಶ್ರೀ ಮನೋಜ್ ಕುಮಾರ್ ಎ.ಸಿ., ಸಹಾಯಕ ಇಂಜಿನಿಯರ್, ಇವರು ಉಲ್ಲೇಖ(4)ರ ದಿನಾಂಕ: 22.11.2019ರಂದು ಸರ್ಕಾರಕ್ಕೆ ಸಲ್ಲಿಸಿರುವ ಲಿಖಿತ ವಿವರಣೆಯಲ್ಲಿ ತಮ್ಮ ವಾಸಸ್ಥಳ ಬೆಂಗಳೂರು ಆಗಿದ್ದು, ವಯಸ್ಸಾದ ತಾಯಿಯು ತಮ್ಮ ಜೊತೆಯಲ್ಲಿಯೇ ಇದ್ದು ಅನಾರೋಗ್ಯದಿಂದ (ಪ್ಯಾರಲಿಸಿಸ್) ಬಳಲುತ್ತಿದ್ದು ಅವರ ಪೋಷಣೆ ಮತ್ತು ಆರೈಕೆ ತಾವೇ ಮಾಡಬೇಕಾಗಿರುವುದರಿಂದ ತಮ್ಮನ್ನು ಬೆಂಗಳೂರು ಅಥವಾ ಬೆಂಗಳೂರು ಹತ್ತಿರವೇ ನೇಮಿಸುವಂತೆ ವಿನಂತಿಸಿರುತ್ತಾರೆ.

ಪು.ತಿ.ನೋ.

ಸರ್ಕಾರವು ಶ್ರೀ ಮನೋಜ್ ಕುಮಾರ್ ಎ.ಸಿ., ಸಹಾಯಕ ಇಂಜಿನಿಯರ್ ರವರ ಮನವಿಯನ್ನು ಪರಿಶೀಲಿಸಿರುತ್ತದೆ. ಸದರಿಯವರನ್ನು ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಹುದ್ದೆಗೆ ಕೆ.ಸಿ.ಎಸ್.ಆರ್. ನಿಯಮ 32ರಡಿ ಸ್ವತಂತ್ರ ಪ್ರಭಾರದಲ್ಲಿರಿಸಿ 8 ತಿಂಗಳಿಗೂ ಹೆಚ್ಚಿನ ಅವಧಿ ಗತಿಸಿದ್ದರೂ ವೈಯಕ್ತಿಕ ಕಾರಣಗಳನ್ನು ನೀಡಿ ಕರ್ತವ್ಯಕ್ಕೆ ವರದಿ ಮಾಡಿಕೊಳ್ಳದೇ ಸರ್ಕಾರಿ ಆದೇಶವನ್ನು ಉಲ್ಲಂಘಿಸಿ ಗಂಭೀರ ಸ್ವರೂಪದ ಕರ್ತವ್ಯಲೋಪ ಎಸಗಿರುತ್ತಾರೆ. ಆದ್ದರಿಂದ ಶ್ರೀ ಮನೋಜ್ ಕುಮಾರ್ ಎ.ಸಿ., ಸಹಾಯಕ ಇಂಜಿನಿಯರ್ ಇವರನ್ನು ಕೆ.ಸಿ.ಎಸ್.ಆರ್.ನಿಯಮ 32ರಡಿ ಸ್ವತಂತ್ರ ಪ್ರಭಾರದಲ್ಲಿ ಇರಿಸಿರುವ ಆದೇಶವನ್ನು ರದ್ದುಪಡಿಸಿ ಸಹಾಯಕ ಇಂಜಿನಿಯರ್ ಹುದ್ದೆಯಲ್ಲಿಯೇ ಮುಂದುವರೆಸಲು ಸರ್ಕಾರವು ತೀರ್ಮಾನಿಸಿದೆ. ಆದ್ದರಿಂದ ಈ ಕೆಳಕಂಡ ಆದೇಶ.

**ಆದೇಶ ಸಂಖ್ಯೆ. ಗ್ರಾಅಪ 86 ಇಎನ್‌ಕ್ಯೂ 2019, ಬೆಂಗಳೂರು,**
**ದಿನಾಂಕ:29.06.2020.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ ಸರ್ಕಾರವು ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆಯ ಸೇವೆಗೆ ಸೇರಿದ ಶ್ರೀ ಎ.ಸಿ.ಮನೋಜ್ ಕುಮಾರ್, ಸಹಾಯಕ ಇಂಜಿನಿಯರ್ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗ, ಬೆಂಗಳೂರು ಗ್ರಾಮಾಂತರ ಇವರಿಗೆ ಸರ್ಕಾರದ ಅಧಿಸೂಚನೆ ಸಂಖ್ಯೆ: ಗ್ರಾಅಪ 165 ಸೇಶಿಕಾ 2019 ದಿನಾಂಕ: 20.09.2019 ಮತ್ತು 05.10.2019 ಗಳಲ್ಲಿ ಕೆ.ಸಿ.ಎಸ್.ಆರ್. ನಿಯಮ 32ರ ಅನುಸಾರ ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಹುದ್ದೆಯಲ್ಲಿ ಸ್ವತಂತ್ರ ಪ್ರಭಾರದಲ್ಲಿರಿಸಿರುವುದನ್ನು ತಕ್ಷಣದಿಂದ ಜಾರಿಗೆ ಬರುವಂತೆ ರದ್ದುಪಡಿಸಿ, ಹಾಲಿ ಕರ್ತವ್ಯ ನಿರ್ವಹಿಸುತ್ತಿರುವ ಸಹಾಯಕ ಇಂಜಿನಿಯರ್ ಹುದ್ದೆಯಲ್ಲಿ ಮುಂದುವರೆಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಶರಣಬಸಪ್ಪ ಎಂ.), 29/6/2020
ಸರ್ಕಾರದ ಅಧೀನ ಕಾರ್ಯದರ್ಶಿ(ಸೇವೆಗಳು-ಎ),
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**ಇವರಿಗೆ:**

1. ಮಹಾಲೇಖಪಾಲರು (ಅ ಮತ್ತು ಇ), ಕರ್ನಾಟಕ, ಬೆಂಗಳೂರು.
2. ಆಯುಕ್ತರು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, ಬೆಂಗಳೂರು
3. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಬೆಂಗಳೂರು.
4. ಮುಖ್ಯ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, ಬೆಂಗಳೂರು
5. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಬೆಂಗಳೂರು ಗ್ರಾಮಾಂತರ ಜಿಲ್ಲಾ ಪಂಚಾಯತ್.
6. ಕಾರ್ಯಪಾಲಕ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗ, ಬೆಂಗಳೂರು ಗ್ರಾಮಾಂತರ.
7. ಶ್ರೀ ಮನೋಜ್ ಕುಮಾರ್ ಎ.ಸಿ., ಸಹಾಯಕ ಇಂಜಿನಿಯರ್ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗ, ಬೆಂಗಳೂರು ಗ್ರಾಮಾಂತರ
8. ಮಾನ್ಯ ಗ್ರಾ..ಅ.ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿಯವರಿಗೆ.
9. ಗ್ರಾ.ಅ.ಪಂ.ರಾಜ್ ಇಲಾಖೆಯ ಪ್ರಧಾನ ಕಾರ್ಯದರ್ಶಿ / ಉಪ ಕಾರ್ಯದರ್ಶಿ (ಆಡಳಿತ) ರವರುಗಳ ಆಪ್ತ ಕಾರ್ಯದರ್ಶಿ/ ಆಪ್ತ ಸಹಾಯಕರಿಗೆ.
10. ಮೇಲ್ವಿಚಾರಕರು, ಗಣಕಯಂತ್ರ ವಿಭಾಗ, ಗ್ರಾ.ಅ.ಪಂ.ರಾಜ್ ಇಲಾಖೆ ಇವರಿಗೆ ವೆಬ್‌ಸೈಟ್‌ನಲ್ಲಿ ಪ್ರಕಟಿಸುವ ಸಲುವಾಗಿ.
11. ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.